ಹೊಸದಾಗಿ ಸೃಜಿಸಿರುವ ಗ್ರಾಮೀಣಾ ಕುಡಿಯುವ ನೀರು ಮತ್ತು ನೈರ್ಮಲ್ಯ ಉಪವಿಭಾಗ, ಮಾಗಡಿ ಉಪವಿಭಾಗಕ್ಕೆ ಸಂಬಂಧಿಸಿದಂತೆ ಖಾಲಿ ಇರುವ ಹುದ್ದೆಗಳನ್ನು ಅಗತ್ಯತೆಗನುಗುಣವಾಗಿ ಲೋಕೋಪಯೋಗಿ ಇಲಾಖೆಯಿಂದ ನಿಯೋಜನೆ ಮೂಲಕ ತುಂಬಲು ಕ್ರಮ ಕೈಗೊಳ್ಳಲಾಗುತ್ತಿದೆ.

ಕೊಠಡಿಗಳ ಕೊರತೆ

1355(914); ಶ್ರೀ ಬಾಲಕೃಷ್ಣ ಹೆಚ್ ಸಿ (ಮಾಗಡಿ)

ಅ) ಮಾಗಡಿ ಕ್ಷೇತ್ರ ವ್ಯಾಪ್ತಿಯಲ್ಲಿರುವ ಮಾಗಡಿ ಮತ್ತು ಕುದೂರು ಸರ್ಕಾರಿ ಪ್ರಥಮ ದರ್ಜೆ ಕಾಲೇಜುಗಳಲ್ಲಿ ಮೂಲಭೂತ ಸೌಲಭ್ಯಗಳ ಕೊರತೆ ಇರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ;

ಆ) ಬಂದಿದ್ದಲ್ಲಿ, ಮೂಲಭೂತ ಸೌಲಭ್ಯಗಳಲ್ಲೊಂದಾದ ಕೊಠಡಿಗಳ ಕೊರತೆಯನ್ನು ನೀಗಿಸಲು ಸರ್ಕಾರವು ಕೈಗೊಂಡಿರುವ ಕ್ರಮವೇನು; ಯಾವ ಕಾಲಮಿತಿಯಲ್ಲಿ ಒದಗಿಸಲಾಗುವುದು?

ಶ್ರೀ ಆರ್.ವಿ. ದೇಶಪಾಂಡೆ (ಮಾನ್ಯ ಉನ್ನತ ಶಿಕ್ಷಣ ಸಚಿವರು)

ಅ) ಬಂದಿದೆ

ಆ) 2012–13ನೇ ಸಾಲಿನಲ್ಲಿ ಸರ್ಕಾರಿ ಪ್ರಥಮ ದರ್ಜೆ ಕಾಲೇಜು, ಮಾಗಡಿ ಇಲ್ಲಿಗೆ ಹೆಚ್ಚುವರಿ ಕೊಠಡಿ ನಿರ್ಮಾಣಕ್ಕಾಗಿ ₹ 100.00 ಲಕ್ಷ, ಪ್ರಯೋಗಾಲಯಕ್ಕಾಗಿ ₹ 60.00 ಲಕ್ಷ ಮತ್ತು ಶೌಚಾಲಯಕ್ಕಾಗಿ ₹ 50.00 ಲಕ್ಷ ಅನುದಾನವನ್ನು ಒದಗಿಸಲಾಗಿದ್ದು, ನಿರ್ಮಾಣ ಕಾರ್ಯವನ್ನು ಕ್ರಮವಾಗಿ ಕರ್ನಾಟಕ ಗೃಹ ಮಂಡಳಿಗೆ ಮತ್ತು ಲೋಕೋಪಯೋಗಿ ಇಲಾಖೆಗೆ ವಹಿಸಿದ್ದು, ಕಾರ್ಯಾದೇಶ ನೀಡಲಾಗಿದ್ದು ಕಾಮಗಾರಿ ಪ್ರಗತಿಯಲ್ಲಿದೆ. ಪ್ರಸ್ತುತ ಸಾಲಿನಲ್ಲಿ ಸರ್ಕಾರಿ ಪ್ರಥಮ ದರ್ಜೆ ಕಾಲೇಜು, ಮಾಗಡಿ ಇಲ್ಲಿ ₹ 12.00 ಲಕ್ಷಗಳ ವೆಚ್ಚದಲ್ಲಿ

ಮಹಿಳಾ ವಿಶ್ರಾಂತಿ ಕೊಠಡಿಯೊಂದಿಗೆ ಶೌಚಾಲಯ ನಿರ್ಮಿಸಲು ಕಾರ್ಯಾದೇಶ ನೀಡಲಾಗಿದೆ. ಹಾಗೂ ₹ 51.00 ಲಕ್ಷಗಳ ವೆಚ್ಚದಲ್ಲಿ 03 ತರಗತಿ ಕೊಠಡಿಗಳನ್ನು ನಿರ್ಮಿಸಲು ಆದೇಶಿಸಲಾಗಿದೆ. ಕುದೂರು ಕಾಲೇಜಿಗೆ ಅಗತ್ಯವಿರುವ ತರಗತಿ ಕೊಠಡಿಗಳನ್ನು ನಿರ್ಮಿಸಲು ಪ್ರಾಂಶುಪಾಲರಿಂದ ಪ್ರಸ್ತಾವನೆ ಬಂದಲ್ಲಿ, ಪರಿಶೀಲಿಸಿ ಅನುದಾನದ ಲಭ್ಯತೆ ಆಧಾರ ಕ್ರಮಕೈಗೊಳ್ಳಲಾಗುವುದು

ಪ್ರವಾಸೋದ್ಯಮ ಅಭಿವೃದ್ಧಿ

1356(915); ಶ್ರೀ ಬಾಲಕೃಷ್ಣ ಹೆಚ್.ಸಿ. (ಮಾಗಡಿ)

ಅ) ಮಾಗಡಿ ತಾಲ್ಲೂಕಿನ ಐತಿಹಾಸಿಕ ಸಾವನದುರ್ಗವು ಪ್ರವಾಸೋದ್ಯಮ ಇಲಾಖೆಗೆ ಸೇರ್ಪಡೆಯಾಗಿದೆಯೇ;

ಆ) ಇಲ್ಲದಿದ್ದರೆ, ಪ್ರವಾಸೋದ್ಯಮ ಇಲಾಖೆಗೆ ಸೇರಿಸಲು ಸರ್ಕಾರವು ಕೈಗೊಂಡಿರುವ ಕ್ರಮವೇನು?

ಶ್ರೀ ಆರ್.ವಿ. ದೇಶಪಾಂಡೆ (ಉನ್ನತ ಶಿಕ್ಷಣ ಮತ್ತು ಪ್ರವಾಸೋದ್ಯಮ ಸಚಿವರು)

ಅ) ಸಾವನದುರ್ಗವನ್ನು ಪ್ರವಾಸಿ ತಾಣವೆಂದು ಇಲಾಖೆಯಿಂದ ಗುರುತಿಸಲಾಗಿದೆ.

ಆ) ಉದ್ಭವಿಸುವುದಿಲ್ಲ.